232 (873) : ಶ್ರೀ ಧ್ರುವನಾರಾಯಣ.ಆರ್. (ಸಂತೇಮರಳ್ಳಿ) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಲಕ್ಷಾಂತರ ಎಕರೆ ಜಮೀನುಗಳಿಗೆ ನೀರು ಒದಗಿಸುವ ಕಬಿನಿ–11ನೇ ಹಂತದ ಯೋಜನೆಯು ಮಂದಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಯೋಜನೆಯನ್ನು ತ್ವರಿತವಾಗಿ ಕಾರ್ಯಗತಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) ಕಬಿನಿ ಏತ ನೀರಾವರಿ ಯೋಜನೆಯ ನಾಲೆಗಳ ಸರ್ವೇ ಕಾರ್ಯವನ್ನು ಮಾಡಬೇಕಾಗಿದ್ದು, ಅವು ಪ್ರಗತಿಯಲ್ಲಿದೆ.

ಆ) ಸರ್ವೆ ಕಾರ್ಯ ಪೂರ್ಣಗೊಂಡ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

233 (215) : ಶ್ರೀ ಗಂಗಾಧರ್ ನಾಗೇಶ್ ಭಟ್ (ಕಾರವಾರ) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಜೋಯಿಡಾ ತಾಲ್ಲೂಕಿನಲ್ಲಿರುವ ಒಟ್ಟು ಗ್ರಾಮಗಳು ಎಷ್ಟು;

ಆ) ಗ್ರಾಮವಾರು ಇರುವ ಜನಸಂಖ್ಯೆ ಎಷ್ಟು;

ಇ) ಎಷ್ಟು ಗ್ರಾಮಗಳಿಗೆ ಬಸ್ ಸಂಚಾರ ಸೌಕರ್ಯ ಒದಗಿಸಲಾಗಿದೆ;

ಈ) ಬಸ್ ಸಂಚಾರದ ಅಗತ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಸ್ ಸಂಚಾರ ಪ್ರಾರಂಭಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು)

ಅ) 116.

ಆ) ಅನುಬಂಧದಲ್ಲಿ ನೀಡಿದೆ.

ಇ) 86.

ಈ) ಬಂದಿದೆ.

ಸಂಚಾರಕ್ಕೆ ಯೋಗ್ಯವಾದ ರಸ್ತೆಗಳು ಲಭ್ಯವಾದ ನಂತರ ಉಳಿದ 30 ಗ್ರಾಮಗಳಿಗೆ ಸಾರಿಗೆ ಸೌಲಭ್ಯವನ್ನು ಒದಗಿಸಲಾಗುವುದು.